# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಂದಾಯ ಅಧಿಕಾರಿಗಳ ಕಛೇರಿ, ಹೊರಮಾವು ಉಪ ವಲಯ,**
**ಮಹದೇವಪುರ ವಲಯ ಬೆಂಗಳೂರು-43.**

ಸಂಖ್ಯೆ.ಬಿಬಿಎಂಪಿ/ಸಕಂಅಹೊಉವ/(ಸಿಬ್ಬಂದಿ)ಪಿಆರ್/ /2022-23 ದಿನಾಂಕ:- 17.12.2022

***ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/ 2020-21 ದಿನಾಂಕ:21/09/2020 ಹಾಗೂ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರು ದಿನಾಂಕ:-17.12.2022 ರಂದು ಹೊರಮಾವು ಉಪ-ವಿಭಾಗದ ಕಛೇರಿಯಲ್ಲಿ ಹೊರಮಾವು ವಾರ್ಡ್-81ರ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.***

**ಉಪಸ್ಥಿತರು:**

| ಕ್ರ.ಸಂ | ಹೆಸರು | ಹುದ್ದೆ | ಮೊ.ನಂ |
|---|---|---|---|
| 1 | ಶ್ರೀಮತಿ ಎಮ್. ಸರೋಜದೇವಿ | ಉಪ ಆಯುಕ್ತರು, ಮಹದೇವಪುರ ವಲಯ | 9480684059 |
| 2 | ಶ್ರೀ.ಎಸ್.ಹೆಚ್.ಕೇಶವ | ನೋಡಲ್ ಅಧಿಕಾರಿ ವಾರ್ಡ್ ನಂ-81 | 9448731722 |
| 4 | ಶ್ರೀ. ರಮೇಶ್ | ಸಹಾಯಕ ಅಭಿಯಂತರರು ವಾರ್ಡ್ ಸಂಚಾಲಕರು | 9480688025 |
| 5 | ಶ್ರೀ.ಸಂಜಯ್ ಕುಮಾರ್ | ಹಿರಿಯ ಆರೋಗ್ಯ ನಿರೀಕ್ಷಕರು | |
| 6 | ಶ್ರೀ.ಹರೀಶ್ ಕುಮಾರ್ ಕೆ.ವಿ | ಕಿರಿಯ ಆರೋಗ್ಯ ನಿರೀಕ್ಷಕರು | |
| 7 | ಶ್ರೀ.ಬಾಲಕೃಷ್ಣ ನಾಯಕ್ ಎಸ್ | ಮಾರ್ಷಲ್ ವಾರ್ಡ್ ನಂ.81 | |
| ಸಾರ್ವಜನಿಕರು | | | |
| 8 | ಶ್ರೀ.ಅರುಣಗಿರಿ | ಆರ್ಕ್ ಅಸೋಸಿಯೇಷನ್ ಹೊರಮಾವು | |
| 9 | ಶ್ರೀ.ಮುರಳಿ | ಹೊರಮಾವು | |

**ಮಾನ್ಯ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಇತರೆ ಸಂಘ ಸಂಸ್ಥೆಗಳು ಸಾರ್ವಜನಿಕರಿಗೆ ಸುಸ್ವಾಗತ ಕೋರುತ್ತಾ, ಬಿಬಿಎಂಪಿ ವಾರ್ಡ್ ನಂ.81 ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, 110 ಹಳ್ಳಿಗಳ ವ್ಯಾಪ್ತಿಯಲ್ಲಿ ಬಿಡಬ್ಲೂಎಸ್‌ಎಸ್‌ಬಿ ರವರು ಕೊಳವೆ ಸಾಲುಗಳ ಅಳವಡಿಸುತ್ತಿರುವ ಸಂಬಂಧ ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಾರ್ವಜನಿಕರಿಗೆ ಸುಸ್ವಾಗತ ಕೋರಿ ಸಭೆಯನ್ನು ಆರಂಭಿಸಿದರು.**

ಪು.ತಿ.ನೋ

**ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚೆ:-**

**ಶ್ರೀ.ಅರುಣಗಿರಿ (ಆರ್ಕ್ ಅಸೋಸಿಯೇಷನ್ ಹೊರಮಾವು) :-** ರವರು ಮಾತನಾಡುತ್ತಾ ಜಯಂತಿ ನಗರ ಹೊರಮಾವು ಅಗರ ಮುಖ್ಯರಸ್ತೆ / ಕಲ್ಕೆರೆ ಮುಖ್ಯರಸ್ತೆ ಪಾದಚಾರಿಯಲ್ಲಿ ಕೆಲವು ತಾತ್ಕಾಲಿಕ ಅಂಗಡಿಗಳನ್ನು ಇಟ್ಟುಕೊಂಡಿದ್ದು, ಇದರಿಂದ ಸಿಗ್ನಲ್ ಬಳಿ ಸಂಚಾರ ದಟ್ಟಣೆ ಉಂಟಾಗುತ್ತಿದ್ದು, ಕೂಡಲೇ ಪಾದಚಾರಿ ಒತ್ತುವರಿಗಳನ್ನು ತೆರವುಗೊಳಿಸಲು ಕೋರಿಕೊಂಡಿರುತ್ತಾರೆ.

ಕ್ರಮ:- ಸಹಾಯಕ ಅಭಿಯಂತರರು, ಹೊರಮಾವು ವಾರ್ಡ್ ನಂ.81 ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

**ಶ್ರೀ.ಮುರಳಿ, ಹೊರಮಾವು :-** ರವರು ಮಾತನಾಡುತ್ತಾ, ಹೊರಮಾವು ಗ್ರಾಮದ ಸರ್.ಎಂ.ವಿ ನಗರ ಮುಖ್ಯರಸ್ತೆಯಲ್ಲಿ ತಾತ್ಕಾಲಿಕ ಶೆಡ್‌ನ್ನು ರಸ್ತೆಗೆ ಒತ್ತುವರಿ ಮಾಡಿಕೊಂಡಿದ್ದು, ಇದನ್ನು ಸಾರ್ವಜನಿಕರ ಹಿತದೃಷ್ಠಿಯಿಂದ ಕೂಡಲೇ ತೆರವುಮಾಡಿಕೊಡಬೇಕೆಂದು ಕೋರಿಕೊಂಡಿರುತ್ತಾರೆ.

ಕ್ರಮ:- ಸಹಾಯಕ ಅಭಿಯಂತರರು, ಹೊರಮಾವು ವಾರ್ಡ್ ನಂ.81 ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

**ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸ.ಕಾ.ಅ ಹೊರಮಾವು ರವರು ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ದಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ನೋಡಲ್ ಅಧಿಕಾರಿಗಳ ಅಪ್ಪಣೆ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಿದರು.**

ಶ್ರೀ.ರಮೇಶ್
ಸಹಾಯಕ ಅಭಿಯಂತರರು ಹೊರಮಾವು ವಾರ್ಡ್
ಸಂಖ್ಯೆ-81
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

17/12
(ಎಸ್.ಹೆಚ್ ಕೇಶವ)
ನೋಡೆಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ-81
ಹಾಗೂ ತೋಟಗಾರಿಕಾ ನಿರೀಕ್ಷಕರು
(ಮಹದೇವಪುರ ವಲಯ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:-
1.ಕೌನ್ಸಿಲ್ ಕಾರ್ಯದರ್ಶಿ ರವರ ಅವಗಾಹನೆಗೆ ಮಂಡಿಸಲಾಗಿದೆ.
2.ಕಛೇರಿ ಪ್ರತಿ.